ಚಿಕ್ಕಮಗಳೂರು ಜಿಲ್ಲೆಯ ಮುಂದುವರಿಕೆ ಶಿಕ್ಷಣಕ್ಕೆ ಕೇಂದ್ರ ಸರ್ಕಾರದಿಂದ ಮಂಜೂರಾದ ಹಣ

4547 (5162) : ಶ್ರೀ ನೀಲಕಂಠಯ್ಯ ಬಿ.ಆರ್. (ತರಿಕೆರೆ) : ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯಗಳು, ಮುದ್ರಣ ಮುಖ್ಯ ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮುಂದುವರಿಕೆ ಶಿಕ್ಷಣ ಕಾರ್ಯಕ್ರಮದಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಣ ಎಷ್ಟು?

ಆ) ಇದರಲ್ಲಿ ಚಿಕ್ಕಮಗಳೂರು ಜಿಲ್ಲೆಗೆ ಬಿಡುಗಡೆ ಯಾದ ಮತ್ತು ಖರ್ಚಾದ ಹಣ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು).

ಶ್ರೀ ಬಾಬುರಾವ್ ಚವ್ಹಾಣ (ವಯಸ್ಕರ ಶಿಕ್ಷಣ, ಗ್ರಂಥಾಲಯಗಳು, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು)

ಅ) ಮುಂದುವರಿಕೆ ಶಿಕ್ಷಣ ಕಾರ್ಯಕ್ರಮದಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ 2003ರ ಜೂನ್ ಅಂತ್ಯದವರೆಗೆ ರೂ. 51.10 ಕೋಟಿ ಬಿಡುಗಡೆಯಾಗಿದೆ.

ಆ) ಚಿಕ್ಕಮಗಳೂರು ಜಿಲ್ಲೆಗೆ ರೂ. 78.59 ಲಕ್ಷಗಳು ಬಿಡುಗಡೆಯಾಗಿರುತ್ತದೆ. ಈವರೆಗೆ ರೂ. 36.19 ಲಕ್ಷಗಳು ಖರ್ಚಾಗಿದ್ದು, ತಾಲ್ಲೂಕುವಾರು ವಿವರ ಕೆಳಗಿನಂತಿರುತ್ತದೆ:

1.	ಚಿಕ್ಕಮಗಳೂರು	3.48
2.	ಕಡೂರು	6.26
3.	ಬೀರೂರು	4.82
4.	ತರೀಕೆರೆ	6.57
5.	ಮೂಡಿಗೆರೆ	3.88
6.	ನರಸಿಂಹರಾಜಪುರ	1.13
7.	ಶೃಂಗೇರಿ	4.24
8.	ಕೊಪ್ಪ	4.24
9.	ಜಿಲ್ಲಾ ಸಾಕ್ಷರತಾ ಸಮಿತಿ	1.47

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನೀಡುವ ಮಾಸಾಶನ

4548 (5254) : ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕನ್ನಡ ಹಾಗೂ ಸಂಸ್ಕೃತಿ ಇಲಾಖೆಯಿಂದ ನೀಡಲಾಗುವ ಮಾಸಾಶನಗಳು ಯಾವುವು ಹಾಗೂ ನೀಡಲಾಗುವ ಮೊತ್ತ ಎಷ್ಟು?

ಆ) ಬೇರೆ ಬೇರೆ ಮಾಸಾಶನಗಳ ಅಡಿಯಲ್ಲಿ ಎಷ್ಟು ಜನರಿಗೆ ಈ ಸೌಲಭ್ಯ ವಿಸ್ತರಿಸಲಾಗಿದೆ. (ಜಿಲ್ಲಾವಾರು ವಿವರ ನೀಡುವುದು)

ಇ) ಮಾಸಾಶನ ಪಡೆಯುತ್ತಿರುವವರಲ್ಲಿ ಗರಿಷ್ಟ ಹಾಗೂ ಕನಿಷ್ಟ ವಯೋಮಾನ ಎಷ್ಟು?